ತಾರೀಖು 12ನೇ ಜುಲೈ 1887.

ಇದರಿಂದ ಸಂಬಂಧಪಟ್ಟ ಜನಗಳಿಗೆ ತಿಳಿಯಪಡಿಸುವದೇನಂದರೆ, ಜೇಲೂರು ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಜೀವಾರಸಾಗಿ ಇರತಕ್ಕ ಈ ಕೆಳಗೆ ವಿವರಿಸೋಣಾಗಿರುವ ದಸ್ತೈವಜನ್ನು ಹಾಜರ್ಮಾಡಿದವರೇಆಗಲಿ ಅಥವಾ ಅವರಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕರು ಯಾ ಹಕ್ಕುದಾರೆಆಗಲಿ ಈ ನೋಟಿಸ್ ತಾರೀಖು ಲಾಗಾಯಿತು ಒಂದು ತಿಂಗಳುವಳಗಾಗಿ ಬೇಲೂರು ಸಬ್ ರಿಜಿಸ್ಟ್ರಾರ್ರಲ್ಲಿ ಹಾಜರಾಗಿ ಸದರೀ ದಸ್ತೈವಜನ್ನು ವಾಪಸ್ ಪಡಿಯಲು ತಪ್ಪಿದರೆ 1877ನೇ ಇಸವಿ 3ನೇ ನಂಬರ್ ಇಂಡಿಯ್ಯ ರಿಜಿಸ್ಟ್ರೇಷ್ಯನ ಆಕ್ಟಿನ 85ನೇ ಸೆಕ್ಷನ್ ಅನುಸರಿಸಿ ನಾಶಮಾಡಲ್ಪಡುವದು.

ನಂಬರ್.	ರಿಜಿಸ್ಟ್ರೇಷನ್ ತಾರೀಖು.	ರಿಜಿಸ್ಟ್ರೇಷನ್ ಬಗ್ಗೆ ಪೂರ್ತಿ ಮಾಡಿದ ತಾರೀಖು.	ರಿಜಿಸ್ಟ್ರೇಷನ್ ಬಗ್ಗೆ ಪೂರ್ತಿ ತಾರೀಖು.	ದಸ್ತೈವಜನ್ನು ಬರದುಕೊಟ್ಟವರ ಹೆಸರು ಮತ್ತು ವಾಸಸ್ಥಳ.	ದಸ್ತೈವಜನ್ನು ಬರಿಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
1	27—5—85	27—5—85	28—5—85	ನಾರ್ವೆ ಫಿರ್ಕಾ ಶಾನುಭೋಗ ಬಂದಪ್ಪಯ್ಯನವರ ಹೆಂಡತಿ ಹೊನ್ನಮ್ಮ	ಸಕಲೇಶಪುರದಲ್ಲಿರುವ ಕೋಳೂರು ಪುಟ್ಟಯ್ಯನವರಮಗ ಆರ್ಟ್ ಹಳ್ಳಿ ಕೇಕದಾರಿ ಸೀತಾರಾಮಯ್ಯ	ಯಾವ ದ್ವಿಪಕ್ಷ ಆಸ್ತಿ ವಿಚಾರಣೆ ವುದ್ರಿ ವಸೂಲಿ ದಾವಾ ವಗೈರೆ ಬಗ್ಯೆ ಸರ್ವಾಧಿಕಾರ ವಹಿಸಿರುವ ಪತ್ರ.
1885—86						

ಪಿ. ಯ್ಯಾ. ಪೂರ್ಣಯ್ಯ, ರಿಜಿಸ್ಟ್ರಾರ್.

ನಗರ ಡಿವೀಜ್ಯ ಡಿಸ್ಟ್ರಿಕ್ಟ್ ಜಡ್ಜ್‌ಯವರಕೋರ್ಟ್‌ನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 69.

ಮೃತಪಟ್ಟ ದಾಸಣ್ಣನ ಆಸ್ತಿ ವಿಷಯದಲ್ಲಿ—

ಅರ್ಜೀದಾರಳು ಲಕ್ಷ್ಮಮ್ಮನು, ಮೃತಪಟ್ಟ ಸದರೀ ದಾಸಣ್ಣನಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಚಿಕ್ಕಮಗಳೂರು ಸ್ಥಳದ ಲಕ್ಷ್ಮಮ್ಮನು ಚಿಕ್ಕಮಗಳೂರು ವಾಸಸ್ಥನಾಗಿ ಮೃತಪಟ್ಟ ದಾಸಣ್ಣನ ಜಿಂಡಗಿ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಳವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ಲಕ್ಷ್ಮಮ್ಮನ ಅರ್ಜೀಯನ್ನು 1887ನೇ ಇಸವಿ ಆಗಸ್ಟು ತಿಂಗಳು ತಾರೀಖು 20ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದಾಸಣ್ಣನ ಆಸ್ತಿಗೆ ಹಕ್ಕುದಾರರಾದ ವಿಸಿಪ್ಪರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಯಿಸವಿ ಜುಲೈ ತಿಂಗಳು 17ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಟಿ. ನರಹರಿರಾವ್,
ಡಿಸ್ಟ್ರಿಕ್ಟ್ ಜಡ್ಜ್.

ಕಡೂರು ಡಿಸ್ಟ್ರಿಕ್ಟ್.

ತಾರೀಖು 23ನೇ ಜುಲೈ 1887.

ಕಡೂರು ಡಿಸ್ಟ್ರಿಕ್ಟ್ ಕೊಪ್ಪ ತಾಲ್ಲೂಕು ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಇದರ ಕೆಳಗೆ ನಮೂದಿಸಿರುವ ಜೀವಾರಸ್ ದಸ್ತಾವೇಜುಗಳನ್ನು ಕ್ರಮಪ್ರಕಾರ ವಾರಸ್‌ದಾರ್‌ಆಗಲಿ ಅಥವಾ ಅಧಿಕಾರ ಹೊಂದಿದ ಮುತಾಲೀಕರಾಗಲಿ ಈ ತಾರೀಖು ಲಾಗಾಯಿತು ಒಂದು ತಿಂಗಳೊಳಗಾಗಿ ಹಾಜರಾಗಿ ವಾಪಸ್ ಪಡಿಯಬೇಕು, ತಪ್ಪಿದಲ್ಲಿ ರಿಜಿಸ್ಟ್ರೇಷ್ಯನ ಆಕ್ಟಿನ 85ನೇ ಸೆಕ್ಷನ್ ಪ್ರಕಾರ ನಾಶಪಡಿಸಲ್ಪಡುತ್ತೆ:—